ಬುಧವಾರ 10–09–2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01–ಸಂಚಿಕೆ 42
Digital Varthe Kannada Daily Volume 01 - Issue 42 Wednesday 10-09-2025 Price: 5/- Rs 2 Pages Bengalore
DIGITAL VARTHE
www.digitalvarthe.com
digitalvarthe@gmail.com
# ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

## 9 ಮಂದಿ ಡ್ರಗ್ಸ್ ಪೆಡ್ಲರ್‌ಗಳ ಬಂಧನ :1.5 ಕೋಟಿ ಮೌಲ್ಯದ ಮಾದಕವಸ್ತು ವಶ




ಬೆಂಗಳೂರು: ಇಬ್ಬರು ವಿದೇಶಿ ಪ್ರಜೆಗಳು ಸೇರಿದಂತೆ ಒಂಬತ್ತು ಮಂದಿ ಡ್ರಗ್ಸ್ ಪೆಡ್ಲರ್‌ಗಳನ್ನು ಸಿಸಿಬಿ ಪೊಲೀಸರು ಬಂಧಿಸಿ 1.5 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಕುಮಾರಸ್ವಾಮಿ ಲೇಔಟ್, ಆವಲಹಳ್ಳಿ, ಅಮೃತಹಳ್ಳಿ, ಹೆಬ್ಬಗೋಡಿ, ಮೈಕೊಲೇಔಟ್ ಹಾಗೂ ರಾಮಮೂರ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಮಾದಕವಸ್ತುಗಳನ್ನು ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇರೆಗೆ ಕಾರ್ಯಾಚರಣೆ ಕೈಗೊಂಡು 506 ಗ್ರಾಂ ಎಂಡಿಎಂಎ ಕ್ರಿಸ್ಟಲ್, 50 ಎಲ್–ಎಸ್‌ಡಿ ಸ್ಟ್ರಿಪ್ಸ್ ಗಳು, 85 ಗ್ರಾಂ ಕೊಕೇನ್, 56 ಗ್ರಾಂ ಗಾಂಜಾವನ್ನು ಸಿಸಿಬಿ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಕುಮಾರಸ್ವಾಮಿ ಲೌಔಟ್ : ಇಬ್ಬರು ಎಂಜಿನಿಯರಿಂಗ್ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಾ ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿ ಶಾಸ್ತ್ರಿನಗರದ ಬಳಿ ಪೊಲೀಸರಿಗೆ ಸಿಕ್ಕಿಬಿದ್ದಿದ್ದು, ಆರು ಲಕ್ಷ ರೂ. ಬೆಲೆಯ ಎಲ್‌ಎಸ್‌ಡಿ ಸ್ಟ್ರಿಪ್ಸ್ ಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.
ಆವಲಹಳ್ಳಿ: ಮೆಡಿಕಲ್ ವೀಸಾ ಪಡೆದು ಭಾರತಕ್ಕೆ ಬಂದು ನಂತರ ತನ್ನ ದೇಶಕ್ಕೆ ಹಿಂದಿರಗದೆ ಅಕ್ರಮವಾಗಿ ನಗರದಲ್ಲಿ ನೆಲೆಸಿ ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿದ್ದ ವಿದೇಶಿ ಮಹಿಳೆಯನ್ನು ಬಂಧಿಸಿ ಎರಡು ಲಕ್ಷ ರೂ. ಮೌಲ್ಯದ 22 ಗ್ರಾಂ ಕೊಕೈನ್ ವಶಪಡಿಸಿಕೊಂಡಿದ್ದಾರೆ.
ಇದೇ ವ್ಯಾಪ್ತಿಯ ಮತ್ತೊಂದು ಪ್ರಕರಣದಲ್ಲಿ ಹೈಡ್ರೋಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಯನ್ನು ಬಂಧಿಸಿ 28 ಲಕ್ಷ ರೂ. ಮೌಲ್ಯದ 56 ಗ್ರಾಂ ಹೈಡ್ರೋಗಾಂಜಾ ವಶಪಡಿಸಿಕೊಳ್ಳಲಾಗಿದೆ.

ಹೆಬ್ಬಗೋಡಿ: ಕೇರಳ ರಾಜ್ಯದಿಂದ ಉದ್ಯೋಗ ಅರಸಿಕೊಂಡು ನಗರಕ್ಕೆ ಬಂದು ಮೊಬೈಲ್ ಸರ್ವಿಸ್ ಕೆಲಸ ಮಾಡಿಕೊಂಡು ಹೆಚ್ಚಿನ ಹಣ ಸಂಪಾದನೆಗಾಗಿ ಕಡಿಮೆ ಬೆಲೆಗೆ ಮಾದಕವಸ್ತು ಖರೀದಿ ಮಾಡಿ ಹೆಚ್ಚಿನ ಬೆಲೆಗೆ ನಗರದಲ್ಲಿ ಮಾರಾಟ ಮಾಡುತ್ತಿದ್ದ ಆರೋಪಿ ಪೊಲೀಸರ ಬಲೆಗೆ ಬಿದ್ದಿದ್ದು, ಆತನಿಂದ 15 ಲಕ್ಷ ರೂ. ಮೌಲ್ಯದ 110 ಗ್ರಾಂ ಎಂಡಿಎಂಎ ಕ್ರಿಸ್ಟಲ್ ಜಪ್ತಿ ಮಾಡಲಾಗಿದೆ.
ಮೆಡಿಕಲ್ ವೀಸಾ ಪಡೆದು ಭಾರತಕ್ಕೆ ಬಂದು ನಂತರ ಅಕ್ರಮವಾಗಿ ನಗರದಲ್ಲಿ ವಾಸವಾಗಿದ್ದುಕೊಂಡು ಆಫ್ರಿಕಾ ಮೂಲದ ಡ್ರಗ್‌ಪೆಡ್ಲರ್‌ಗಳಿಂದ ಮಾದಕವಸ್ತು ಖರೀದಿಸಿ ಅವುಗಳನ್ನು ಇದೇ ವ್ಯಾಪ್ತಿಯ ವಿನಾಯಕ ಲೇಔಟ್‌ನಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಖಾಸಗಿ ಕಂಪನಿ ಉದ್ಯೋಗಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿದ್ದ ವಿದೇಶಿ ಪ್ರಜೆಯನ್ನು ಸಿಸಿಬಿ ಪೊಲೀಸರು ಬಂಧಿಸಿ 15 ಲಕ್ಷ ರೂ. ಮೌಲ್ಯದ 81 ಗ್ರಾಂ ಎಂಡಿ–ಎಂಎ ಕ್ರಿಸ್ಟಲ್ ಹಾಗೂ 63 ಗ್ರಾಂ ಕೊಕೇನ್ ವಶಪಡಿಸಿಕೊಂಡು ಮುಂದಿನ ಕಾನೂನು ಕ್ರಮಕ್ಕಾಗಿ ಮೈಕೊಲೇಔಟ್ ಪೊಲೀಸ್ ಠಾಣೆಗೆ ಒಪ್ಪಿಸಲಾಗಿದೆ.

ಮೈಕೊಲೇಔಟ್: ಕೇರಳದಿಂದ ನಗರಕ್ಕೆ ಬಂದು ಹೂಡಿಯಲ್ಲಿ ಬೇಕರಿ ಇಟ್ಟುಕೊಂಡು ಬೇಕರಿಗೆ ಬರುವ ಪರಿಚಯಿಸ್ಥ ಗಿರಾಕಿಗಳಿಗೆ ಮಾದಕವಸ್ತು ಸರಬರಾಜು ಮಾಡುತ್ತಿದ್ದ ಕೇರಳ ರಾಜ್ಯದ ಆರೋಪಿಯನ್ನು ಬಂಧಿಸಿ 36 ಲಕ್ಷ ರೂ. ಮೌಲ್ಯದ 300 ಗ್ರಾಂ ಎಂಡಿಎಂಎ ಕ್ರಿಸ್ಟಲ್‌ನ್ನು ವಶಪಡಿಸಿಕೊಳ್ಳಲಾಗಿದೆ.
ರಾಮಮೂರ್ತಿನಗರ: ಲಾಡ್ಜ್ ವೊಂದರ ಮೇಲೆ ಸಿಸಿಬಿ ಪೊಲೀಸರು ದಾಳಿ ಮಾಡಿ ಮಂಗಳೂರು ಮೂಲದ ಇಬ್ಬರು ವ್ಯಕ್ತಿಗಳನ್ನು ಬಂಧಿಸಿ 3 ಲಕ್ಷ ರೂ. ಮೌಲ್ಯದ 15 ಗ್ರಾಂ ಎಂಡಿಎಂಎ ಕ್ರಿಸ್ಟಲ್, ಸಿರಿಂಜ್‌ಗಳು, ನೀಡಲ್‌ಗಳು ಹಾಗೂ ಎಲೆಕ್ಟ್ರಾನಿಕ್ ತೂಕದ ಯಂತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

# ಅಮೆರಿಕದ ಮೇಲೆ ದಾಳಿ ನಡೆಸಬಲ್ಲ ರಾಕೆಟ್ ಸಿದ್ಧಪಡಿಸಿದ ಕಿಮ್

ಸಿಯೋಲ್: ಉತ್ತರ ಕೊರಿಯಾ ನಾಯಕ ಕಿಮ್ ಜೊಂಗ್ ಉನ್ ಅವರು ಖಂಡಾಂತರ ಕ್ಷಿಪಣಿಗಳಿಗಾಗಿ ವಿನ್ಯಾಸಗೊಳಿಸಲಾದ ಹೊಸ ರಾಕೆಟ್ ಎಂಜಿನ್‌ನ ಪರೀಕ್ಷೆ ಮಾಡಿದ್ದಾರೆ ಎಂದು ವರದಿಯಾಗಿದೆ. ಇದು ಭೂಖಂಡದ ಯುನೈಟೆಡ್ ಸ್ಟೇಟ್?ಸಗೆ ಕಾರ್ಯಸಾಧ್ಯವಾದ ಬೆದರಿಕೆಯನ್ನು ಒಡ್ಡುವ ಶಸ್ತ್ರಾಗಾರವನ್ನು ನಿರ್ಮಿಸುವ ಅವರ ಪ್ರಯತ್ನದ ಇತ್ತೀಚಿನ ಹೆಜ್ಜೆಯಾಗಿದೆ.



ಈ ಕಾರ್ಯಕ್ರಮವು ಕಾರ್ಬನ್ ಫೈಬರ್‌ನಿಂದ ನಿರ್ಮಿಸಲಾದ ಮತ್ತು 1,971 ಕಿಲೋನ್ಯೂಟನ್‌ಗಳ ಒತ್ತಡವನ್ನು ಉತ್ಪಾದಿಸುವ ಸಾಮರ್ಥ್ಯವಿರುವ ಘನ–ಇಂಧನ ರಾಕೆಟ್ ಎಂಜಿನ್‌ನ ಒಂಬತ್ತನೇ ಮತ್ತು ಅಂತಿಮ ನೆಲದ ಪರೀಕ್ಷೆಯಾಗಿದೆ ಎಂದು ಉತ್ತರ ಕೊರಿಯಾದ ಅಧಿಕೃತ ಕೊರಿಯನ್ ಸೆಂಟ್ರಲ್ ನ್ಯೂಸ್ ಏಜೆನ್ಸಿ ತಿಳಿಸಿದೆ, ಇದು ಹಿಂದಿನ ಮಾದರಿಗಳಿಗಿಂತ ಹೆಚ್ಚು ಶಕ್ತಿಶಾಲಿಯಾಗಿದೆ. ಉತ್ತರ ಕೊರಿಯಾವು ಹ್ವಾಸಾಂಗ್ –20 ಎಂಬ ವ್ಯವಸ್ಥೆಯನ್ನು ಒಳಗೊಂಡಂತೆ ಭವಿಷ್ಯದ ಐಸಿಬಿಎಂಗಳಿಗೆ ಬಳಸಲಾಗುವುದು ಎಂದು ಹೇಳಿದ್ದ ಎಂಜಿನ್ ಅನ್ನು ಅಭಿವೃದ್ಧಿಪಡಿಸಿದ ಸಂಶೋಧನಾ ಸಂಸ್ಥೆಗೆ ಕಿಮ್ ಭೇಟಿ ನೀಡಿದ ಒಂದು ವಾರದ ನಂತರ ಈ ವರದಿ ಬಂದಿದೆ. ಇತ್ತೀಚಿನ ವರ್ಷಗಳಲ್ಲಿ ಉತ್ತರ ಕೊರಿಯಾವು ಯು–ಎಸ್ ಮುಖ್ಯ ಭೂಭಾಗವನ್ನು ತಲುಪಲು ಸಂಭಾವ್ಯ ವ್ಯಾಪ್ತಿಯನ್ನು ಪ್ರದರ್ಶಿಸುವ ವಿವಿಧ ಗಳನ್ನು ಹಾರಾಟ–ಪರೀಕ್ಷೆ ಮಾಡಿದೆ.

ಇದರಲ್ಲಿ ಚಲಿಸಲು ಮತ್ತು ಮರೆಮಾಡಲು ಸುಲಭವಾದ ಮತ್ತು ಉತ್ತರದ ಹಿಂದಿನ ದ್ರವ–ಇಂಧನ ಕ್ಷಿಪಣಿಗಳಿಗಿಂತ ಹೆಚ್ಚು ವೇಗವಾಗಿ ಉಡ–ಾವಣೆಗೆ ಸಿದ್ಧಗೊಳಿಸಬಹುದಾದ ಅಂತರ್ನಿರ್ಮಿತ ಘನ ಪ್ರೊಪೆಲ್ಲೆಂಟ್‌ಗಳನ್ನು ಹೊಂದಿದೆ.ಉತ್ತರ ಕೊರಿಯಾದ ದೀರ್ಘ–ಶ್ರೇಣಿಯ ಶಸ್ತ್ರಾಸ್ತ್ರಗಳಲ್ಲಿ ಮತ್ತಷ್ಟು ಪ್ರಗತಿಗೆ ಕಿಮ್ ಕರೆ ನೀಡಿದ್ದಾರೆ, ಇದರಲ್ಲಿ ಕ್ಷಿಪಣಿ ರಕ್ಷಣೆಯನ್ನು ಸೋಲಿಸುವ ಸಾಧ್ಯತೆಗಳನ್ನು ಸುಧಾರಿಸುವ ಬಹು–ಶ್ರೇಣಿಯ ವ್ಯವಸ್ಥೆಗಳ ಅಭಿವೃದ್ಧಿಯೂ ಸೇರಿದೆ.ಉತ್ತರ ಕೊರಿಯಾದ ಎಲ್ಲಾ ಪರೀಕ್ಷೆಗಳನ್ನು ನೆರೆಯ ಪ್ರದೇಶಗಳನ್ನು ತಪ್ಪಿಸಲು ಸಾಮಾನ್ಯಕ್ಕಿಂತ ಕಡಿದಾದ ಪಥಗಳಲ್ಲಿ ನಡೆಸಲಾಗಿದೆ ಮತ್ತು ತಜ್ಞರು ಹೇಳುವಂತೆ ದೇಶವು ತನ್ನ ಸಿಡಿತಲೆಗಳು ವಾತಾವರಣದ ಮರು–ಪ್ರವೇಶದ ಕಠಿಣ ಪರಿಸ್ಥಿತಿಗಳಲ್ಲಿ ಬದುಕುಳಿಯುವುದನ್ನು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ತಂತ್ರಜ್ಞಾನವನ್ನು ಇನ್ನೂ ಪರಿಪೂರ್ಣಗೊಳಿಸಿಲ್ಲದಿರಬಹುದು.

ಸೋಮವಾರದ ಪರೀಕ್ಷೆಯ ನಂತರ ಕಿಮ್ ತೃಪ್ತಿ ವ್ಯಕ್ತಪಡಿಸಿದರು, ಹೊಸ ರಾಕೆಟ್ ಎಂಜಿನ್‌ನ ಕಣ್ಣು ತೆರೆಸುವ ಅಭಿವೃದ್ಧಿಯನ್ನು ಉತ್ತರ ಕೊರಿಯಾದ ಪರಮಾಣು ಪಡೆಗಳನ್ನು ವಿಸ್ತರಿಸುವ ಅವರ ಪ್ರಯತ್ನದಲ್ಲಿ ಮಹತ್ವದ ಬದಲಾವಣೆ ಎಂದು ಕರೆದರು ಎಂದು ಹೇಳಿದೆ. 2019 ರಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮೊದಲ ಅವಧಿಯಲ್ಲಿ ಅಮೆರಿಕ ಜೊತೆಗಿನ ಪರಮಾಣು ಮಾತುಕತೆಗಳು ಕುಸಿದ ನಂತರ ಕಿಮ್ ಪರೀಕ್ಷಾ ಚಟುವಟಿಕೆಗಳನ್ನು ಹೆಚ್ಚಿಸಿದ್ದಾರೆ, ಏಷ್ಯಾ ಮತ್ತು ಅಮೆರಿಕ ಮುಖ್ಯ ಭೂಭಾಗದಲ್ಲಿ ಅಮೆರಿಕದ ಮಿತ್ರರಾಷ್ಟ್ರಗಳನ್ನು ಹೊಡೆಯಲು ವಿನ್ಯಾಸಗೊಳಿಸಲಾದ ವಿವಿಧ ಶ್ರೇಣಿಗಳ ಶಸ್ತ್ರಾಸ್ತ್ರಗಳನ್ನು ಪ್ರದರ್ಶಿಸುತ್ತಿದ್ದಾರೆ.

ಕಿಮ್ ಅವರ ಪರಮಾಣು ಒತ್ತಡವು ಅಂತಿಮವಾಗಿ ಉತ್ತರವನ್ನು ಪರಮಾಣು ಶಕ್ತಿಯಾಗಿ ಸ್ವೀಕರಿಸಲು ಮತ್ತು ಬಲದ ಸ್ಥಾನದಿಂದ ಆರ್ಥಿಕ ಮತ್ತು ಭದ್ರತಾ ರಿಯಾಯಿತಿಗಳನ್ನು ಮಾತುಕತೆ ನಡೆಸಲು ವಾಷಿಂಗ್ಟನ್ ಮೇಲೆ ಒತ್ತಡ ಹೇರುವ ಗುರಿಯನ್ನು ಹೊಂದಿದೆ ಎಂದು ವಿಶ್ಲೇಷಕರು ಹೇಳುತ್ತಾರೆ. ಕಿಮ್ ಸಾಂಪ್ರದಾಯಿಕ ಮಿತ್ರರಾಷ್ಟ್ರಗಳಾದ ರಷ್ಯಾ ಮತ್ತು ಚೀನಾ ಜೊತೆಗಿನ ಸಹಕಾರವನ್ನು ಬಲಪಡಿಸುವ ಮೂಲಕ ತಮ್ಮ ಹತೋಟಿಯನ್ನು ಬಲಪಡಿಸಲು ಪ್ರಯತ್ನಿಸುತ್ತಿದ್ದಾರೆ,

## ತುಪಾಕಿಯ ಪಿಸುಮಾತು ಕಾದಂಬರಿ ಪುಸ್ತಕ ಬಿಡುಗಡೆ ಸಮಾರಂಭ

ಬೆಂಗಳೂರು: ಲೇಖಕ ವಿನೋದ್ ಕೆ. ಎಲ್. ಅವರ ಹೊಸ ಕಾದಂಬರಿ "ತುಪಾಕಿಯ ಪಿಸುಮಾತು" ಪುಸ್ತಕ ಬಿಡುಗಡೆ ಸಮಾರಂಭವು ಚಿತ್ರಕಲಾ ಪರಿಷತ್ತು, ಬೆಂಗಳೂರು ನಲ್ಲಿ 16 ಸೆಪ್ಟೆಂಬರ್ 2025 ರಂದು ಸಂಜೆ 5 ಗಂಟೆಗೆ ನಡೆಯಲಿದೆ.




ಈ ಕಾರ್ಯಕ್ರಮದಲ್ಲಿ ಪುಸ್ತಕ ಲೋಕರ್ಪಣೆ ಕಾರ್ಯವನ್ನು ಪ್ರಖ್ಯಾತ ಲೇಖಖ ಅಧಿಕಾರಿ ಧರಣಿ ದೇವಿ ಮಾಲಗತ್ತಿ ನಿರ್ವಹಿಸಲಿದ್ದಾರೆ. ಪ್ರೊ. ಬಿ. ಗಂಗಾಧರ್ ಕಾರ್ಯಕ್ರಮದ ಅಧ್ಯಕ್ಷತೆಯನ್ನ ವಹಿಸಿಕೊಳ್ಳಲಿದ್ದಾರೆ. ಚಲನಚಿತ್ರ ನಿರ್ದೇಶಕ ಎಸ್. ಮಹೇಂದರ್ ಮುಖ್ಯ ಅತಿಥಿಯಾಗಿ ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಭಾಷಣ ನೀಡಲಿದ್ದಾರೆ. ಪ್ರಖ್ಯಾತ ವಿಮರ್ಶಕ ಪ್ರಕಾಶ್ ರಾಜ್ ಮೇಹು ಅವರು ಪುಸ್ತಕದ ಸಾಂದರ್ಭಿಕ ಮಹತ್ವ ಮತ್ತು ಲೇಖಕರ ಪ್ರಯತ್ನದ ಕುರಿತು ವಿವರವಾಗಿ ಮಾತನಾಡಲಿದ್ದಾರೆ.

ಲೇಖಕ ವಿನೋದ್ ಕೆ. ಎಲ್. ತಮ್ಮ ಆತ್ಮೀಯ ಆಹ್ವಾನ ಮೂಲಕ ಎಲ್ಲ ಸಾಹಿತ್ಯ ಪ್ರಿಯರನ್ನು ಹಾಗೂ ಜನರನ್ನು ಕಾರ್ಯಕ್ರಮದಲ್ಲಿ ಭಾಗಿಯಾಗುವಂತೆ ಪ್ರೀತಿಯಿಂದ ಕರೆದಿದ್ದಾರೆ. ಸಾಹಿತ್ಯ ಲೋಕದಲ್ಲಿ ಹೊಸ ಪ್ರಸ್ಥಾಪನೆ ಆಗುತ್ತಿರುವ "ತುಪಾಕಿಂ–ಮ ಪಿಸುಮಾತು" ಕಾದಂಬರಿ ಕಾರ್ಯಕ್ರಮದಲ್ಲಿ ಪ್ರೇಕ್ಷಕರ ಭರ್ಜರಿ ಹಾಜರಾತಿ ನಿರೀಕ್ಷಿಸಲಾಗಿದೆ.

## 2029ಕ್ಕೆ ರಾಹುಲ್ ಗಾಂಧಿ ಪ್ರಧಾನಿಯಾಗುವುದು ಗ್ಯಾರಂಟಿ :ಡಿಕೆಶಿ ಭವಿಷ್ಯ



ತಿರುವನಂತಪುರಂ: ಜಗತ್ತಿನಲ್ಲಿ ಎಲ್ಲರೂ ಭರವಸೆ ಮೇಲೆ ಬದುಕುತ್ತಾರೆ. ಭರವಸೆ ಇಲ್ಲದೆ ಜೀವನವಿಲ್ಲ. ಕಾಂಗ್ರೆಸ್ ಹೈಕಮಾಂಡ್ ನಿರ್ದೇಶನದಂತೆ ನಾವು ನಡೆದುಕೊಳ್ಳಬೇಕಾಗುತ್ತದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅಧಿಕಾರ ಹಸ್ತಾಂತರ ಕುರಿತಂತೆ ಸೂಚ್ಯವಾಗಿ ಹೇಳಿದ್ದಾರೆ.

ರಾಷ್ಟ್ರೀಯ ಸುದ್ದಿ ವಾಹಿನಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಕರ್ನಾಟಕದಲ್ಲಿ ಅಧಿಕಾರ ಹಸ್ತಾಂತರ, 2028ರ ವಿಧಾನಸಭೆ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂಬ ಆಶಾಭಾವನೆಯನ್ನು ಹೊರಹಾಕಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಎರಡೂವರೆ ವರ್ಷ ಪೂರ್ಣಗೊಂಡ ನಂತರ ನಿಮಗೆ ಅಧಿಕಾರ ಹಸ್ತಾಂತರವಾಗಲಿದೆಯೇ ಎಂಬ ಪ್ರಶ್ನೆಗೆ, ಪಕ್ಷದ ಹೈಕಮಾಂಡ್ ನಾವು ನಿರ್ದೇಶನದಂತೆ ನಡೆಯಬೇಕು ಎಂದಿದ್ದಾರೆ. ಹೈಕಮಾಂಡ್ ಏನು ನಿರ್ಧಾರ ತೆಗೆದುಕೊಳ್ಳುತ್ತದೆಯೋ ಅದನ್ನು ಪಾಲನೆ ಮಾಡುವುದಷ್ಟೇ ನಮ ಕೆಲಸ. ಕರ್ನಾಟಕದಲ್ಲಿ ನಾವು ಜನ–ರಿಗೆ ಉತ್ತಮ ಆಡಳಿತ ನೀಡುವ ಭರವಸೆಯೊಂದಿಗೆ ಅಧಿಕಾರಕ್ಕೆ ಬಂದಿದ್ದೇವೆ. ನಮ ಒಗ್ಗಟ್ಟಿನಿಂದಲೇ ಜನರು ದೊಡ್ಡ ಜನಾದೇಶ ಕೊಟ್ಟಿದ್ದಾರೆ.

ಉತ್ತಮ ಆಡಳಿತ ನಮ್ಮ ಮುಂದಿನ ಗುರಿ ಎಂದು ವದಂತಿಗಳಿಗೆ ತೆರೆ ಎಳೆಯುವ ಪ್ರಯತ್ನ ಮಾಡಿದರು. ಹಾಗಾದರೆ ನೀವು ಸಿಎಂ ಸ್ಥಾನದ ಆಕಾಂಕ್ಷಿಯಲ್ಲವೇ ಎಂದು ಪ್ರಶ್ನಿಸಿದಾಗ, ಜಗತ್ತಿನಲ್ಲಿ ಪ್ರತಿಯೊಬ್ಬರೂ ಭರವಸೆ ಮೇಲೆಯೇ ಬದುಕುತ್ತಾರೆ. ಭರವಸೆ ಇಲ್ಲದ ಜೀವನ ಜೀವನವೇ ಅಲ್ಲ ಎಂದು ಅಡ್ಡಗೋಡೆ ಮೇಲೆ ದೀಪವಿಟ್ಟಂತೆ ಪ್ರತಿಕ್ರಿಯಿಸಿದರು. ದೇಶದ ಜನತೆ ಬದಲಾವಣೆ ಬಯಸುತ್ತಿದ್ದು ,ಮುಂಬರುವ 2029ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸ್ಪಷ್ಟ ಜನಾದೇಶ ಸಿಗಲಿದ್ದು, ಲೋಕಸಭಾ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿಯವರು ಪ್ರಧಾನಿಯಾಗುವುದು ಖಚಿತ ಎಂದು ಆತವಿಶ್ವಾಸದಿಂದು ನುಡಿದರು.

ದೇಶಕ್ಕೆ ಬದಲಾವಣೆಯ ಅಗತ್ಯವಿದೆ. ಈಗ ಜನರು ರಾಹುಲ್ ಗಾಂಧಿಯವರ ನಾಯಕತ್ವವನ್ನು ಎದುರು ನೋಡುತ್ತಿದ್ದಾರೆ. ಭರವಸೆಯ ಬೆಳಕು ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. 2029ರಲ್ಲಿ ಅವರು ಪ್ರಧಾನಿಯಾಗುವುದು ಖಚಿತ. ನನಗೆ ಈ ಬಗ್ಗೆ ತುಂಬಾ ಆತವಿಶ್ವಾಸವಿದೆ ಎಂದು ಹೇಳಿದ್ದಾರೆ. ದೇಶವು ಬದಲಾವಣೆಯನ್ನು ಬಯಸುತ್ತದೆ. ಬಿಹಾರದಲ್ಲಿ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರು ರಾಹುಲ್ ಗಾಂಧಿ ಮುಂದಿನ ಪ್ರದಾನಿ ಎಂದು ಹೇಳಿರುವುದು ಈ ದೇಶದ ಜನತೆ ಯಾರ ನಾಯಕತ್ವವನ್ನು ಎದುರುನೋಡುತ್ತಿದೆ ಎಂಬುದರ ಪ್ರತೀಕವಾಗಿದೆ. ಅವರ ಮುಂದಾಳತ್ವದಲ್ಲಿ ನಡೆಯುತ್ತಿರುವ ಹೋರಾಟಗಳು ಯಶಸಿಯಾಗುತ್ತಿವೆ. ನಾವೆಲ್ಲರು ಕೈಜೋಡಿಸುತ್ತಿದ್ದೇವೆ ಎಂದಿದ್ದಾರೆ. ನಮಗೆ ಬಾಂಗ್ಲಾದಂತಹ ನೆರೆಯ ರಾಷ್ಟ್ರವು ಸ್ನೇಹದಿಂದ ದೂರವಾಗುತ್ತದೆ. ಇದಕ್ಕೆ ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ನೇರ ಕಾರಣ. ಕಾಂಗ್ರೆಸ್ ಸರ್ಕಾರದಲ್ಲಿ ಭಾರತ ಎಲ್ಲಾ ರಾಷ್ಟ್ರಗಳೊಂದಿಗೆ ಉತ್ತಮ ಸಂಬಂಧವನ್ನು ಸಂಪಾದಿಸಿತ್ತು. ಈಗ ಅದು ಕಾಣುತ್ತಿಲ್ಲ ಎಂದು ಪರೋಕ್ಷವಾಗಿ ಪ್ರಧಾನಿ ನರೇಂದ್ರಮೋದಿ ಸರ್ಕಾರದ ವಿದೇಶಾಂಗ ನೀತಿಯನ್ನು ಟೀಕಿಸಿದ್ದಾರೆ.

## ಗ್ರಾಮ ಪಂಚಾಯಿತಿಗಳಿಗೆ ಕೇಂದ್ರದ ಅನುದಾನವೇ ಜೀವಾಳ: ಶಾಸಕ ಎಚ್.ಟಿ.ಮಂಜು

ಕೆ.ಆರ್.ಪೇಟೆ: ತಾಲ್ಲೂಕಿನ ಬಂಡಿಹೊಳೆ ಗ್ರಾಮ ಪಂಚಾಯಿತಿ ವತಿಯಿಂದ ನಿರ್ಮಿಸಲಾಗಿರುವ ಆಡಳಿತ ಮಂಡಳಿಯ ಸಭಾಂಗಣದ ಉದ್ಘಾಟನೆಯನ್ನು ಶಾಸಕ ಎಚ್.ಟಿ.ಮಂಜು ಉದ್ಘಾಟಿಸಿದರು. ಬಳಿಕ ವೇದಿಕೆಯಲ್ಲಿ ಮಾತನಾಡಿದ ಶಾಸಕರು, ಗ್ರಾಮ ಪಂಚಾಯಿತಿಗಳಿಗೆ ರಾಜ್ಯಸರ್ಕಾರದ ಅನುದಾನ ನಿರೀಕ್ಷಿತ ಪ್ರಮಾಣದಲ್ಲಿ ಸಿಗುತ್ತಿಲ್ಲ. ಹೀಗಿರುವಾಗ ಗ್ರಾಪಂಗಳಿಗೆ ಜೀವಸೆಲೆಯಾಗಿರುವುದೇ ಕೇಂದ್ರ ಸರ್ಕಾರದ ಅನುದಾನ. ಅದರಿಂದಲೇ ಗ್ರಾಪಂಗಳು ಹಲವಾರು ಅಭಿವೃದ್ಧಿ ಕೆಲಸಗಳನ್ನು ಮಾಡಲು ಸಾಧ್ಯವಾಗುತ್ತಿದೆ ಎಂದರು.



ಹಿಂದೆ ಬಿಜೆಪಿ ಸರ್ಕಾರದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ತಲಾ 10 ಮನೆಗಳನ್ನು ಹಂಚುತ್ತಿದ್ದರು. ಈ ಕಾಂಗ್ರೆಸ್ ಸರ್ಕಾರದಲ್ಲಿ ಮನೆಗಳಿರಲಿ ಸಣ್ಣಪುಟ್ಟ ಕೆಲಸಗಳೂ ಆಗುತ್ತಿಲ್ಲ. ಹಾಗಾಗಿ ಬರುವ ಜನವರಿ ಅಥವಾ ಫೆಬ್ರವ–ರಿಯಲ್ಲಿ ಗ್ರಾಮ ಪಂಚಾಯಿತಿಗಳ ಚುನಾವಣೆ ನಡೆಯಲಿದ್ದು, ಜನತೆ ಸೂಕ್ತ ನಿರ್ಧಾರ ಕೈಗೊಂಡು ಆಯ್ಕೆಮಾಡಲಿದ್ದಾರೆಂದು ವಿಶ್ವಾಸ ವ್ಯಕ್ತಪಡಿಸಿದರು. ಬಂಡಿಹೊಳೆಯಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿ ಹಲವು ವರ್ಷಗಳಿಂದ ಅರ್ಧಕ್ಕೇ ನಿಂತಿ–ದ್ದು, ಇದಕ್ಕೆ ಕೇಂದ್ರ ಸಚಿವರಾದ ಕುಮಾರಣ್ಣ ಹಾಗೂ ನನ್ನ ಶಾಸಕರ ಪ್ರದೇಶಾಭಿವೃದ್ಧಿ ಅನುಧಾನದಲ್ಲಿ ಅಗತ್ಯ ಅನುದಾನ ನೀಡಿ ಅದನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವ ಭರವಸೆ ನೀಡಿದ ಶಾಸಕರು, ಮುಂಬರುವ ಹೇಮಗಿರಿ ಜಾತ್ರೆಗೆ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಅಗತ್ಯ ನೆರವು ನೀಡುವುದಾಗಿ ಹೇಳಿದರು.

ಈ ವೇಳೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಯಲಕ್ಷ್ಮಿ ಅಣ್ಣಪ್ಪ, ತಾ.ಪಂ.ಇಒ ಸುಷ್ಮ, ಗ್ರಾ.ಪಂ. ಉಪಾಧ್ಯಕ್ಷೆ ಲೀಲಾವತಿ, ಬಂಡಡಾ. ಪುನೀತ್, ಇಂಜಿನಿಯರ್ ಲೋಕೇಶ್, ಗ್ರಾ.ಪಂ.ಮಾಜಿ ಅಧ್ಯಕ್ಷರಾದ ಶಿವಕುಮಾರ್, ಬಿ.ಎನ್.ಸುನಿಲ್, ಬಿ.ಆರ್. ದರ್ಶನ್, ಸದಸ್ಯರಾದ ಪುಷ್ಪ, ಮಧು, ಚೆಲುವಮ್ಮ, ಬಿ.ಬಿ.ಮೋಹನ್, ಗೀತಾಮಣಿ, ರಾಮಯ್ಯ, ಎಲ್. ಎಸ್.ಹೇಮಂತಕುಮಾರ್, ಲಕ್ಷ್ಮೀಪುರ ಜಯಮ್ಮ, ಶಾಂತಮ್ಮಮಾದಯ್ಯ, ಶಿವಣ್ಣ, ಪಿಡಿಒ ಶಿವಕುಮಾರ್, ಕಾರ್ಯದರ್ಶಿ ನಾಗರತ್ನ, ತಾಲ್ಲೂಕು ಯುವ ಜಾ.ದಳ ಅಧ್ಯಕ್ಷ ಮಹಾದೇವೇಗೌಡ, ಜಾ.ದಳ ಮುಖಂಡರಾದ ಬಸವಲಿಂಗಪ್ಪ, ಕಾಯಿಮಂಜಣ್ಣ, ವಸಂತಕುಮಾರ್, ಬೀರುವಳ್ಳಿ ಪರಶುರಾಮ್, ಬೀರುವಳ್ಳಿ ಕುಮಾರ್, ಹರೀನಹಳ್ಳಿ ರಘು, ಚಿಕ್ಕೋಸಹಳ್ಳಿ ನಾಗೇಶ್, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಡಿಜಿಟಲ್ ವಾರ್ತೆ

# ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸಿ: ಪಿ.ಎಸ್.ಮಂಜುನಾಥ

ಬಳ್ಳಾರಿ: ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಸ್ವಚ್ಛ ಭಾರತ್ ಯೋಜನೆಯ ಉದ್ದೇಶಗಳನ್ನು ಯಶಸ್ವಿಗೊಳಿಸಲು ತಮ್ಮೆಲ್ಲರ ಪಾತ್ರ ಅತೀ ಮುಖ್ಯವಾಗಿದೆ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ್ ಅವರು ಹೇಳಿದರು.

ನಗರಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲೆಯ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಸಾಮರ್ಥ್ಯ ಅಭಿವೃದ್ಧಿ ಘಟಕದಡಿ ಸಮಗ್ರ ಘನ ತ್ಯಾಜ್ಯ ವಸ್ತು ನಿರ್ವಹಣೆಯ ಕುರಿತು ನಗರದ ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಒಂದು ದಿನದ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆರೋಗ್ಯಕರ ಮತ್ತು ಸುಸ್ಥಿರ ಸಮುದಾಯಗಳನ್ನು ನಿರ್ಮಿಸಲು ತ್ಯಾಜ್ಯ ನಿರ್ವಹಣೆಯು ಅತ್ಯಗತ್ಯವಾಗಿದೆ. ತರಬೇತಿಯನ್ನು ಪಡೆದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು



ಮತ್ತು ಕಮ್ಯುನಿಟಿ ಮೊಬೆಲೈಜರ್ ಗಳು ತಮ್ಮ ?ತಮ್ಮ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕ್ರಿಯಾಶೀಲರಾಗಿ ಸ್ವಚ್ಛತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು.

ಸ್ವಚ್ಛ ನಗರ, ಪಟ್ಟಣಗಳನ್ನಾಗಿ ಮಾರ್ಪಾಡಿಸಲು ಎಲ್ಲರ ಸಹಕಾರ ಮುಖ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಿ.ಅಬ್ದುಲ್ ರೆಹಮಾನ್ ಮಾತನಾಡಿ, ತರಬೇತಿ ಕಾರ್ಯಾಗಾರದ ಸದುಪಯೋಗ ಪಡೆದುಕೊಂಡು ಕಮ್ಯುನಿಟಿ ಮೊಬೆಲೈಜರ್ ಗಳು ಸೂಕ್ತ ಸಲಹೆ–ಸೂಚನೆಗಳನ್ನು ಅಳವಡಿಸಿಕೊಳ್ಳುವ ಮೂಲಕ ನಗರ, ಪಟ್ಟಣ, ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಅಭಿವೃದ್ಧಿಗೆ ಆದ್ಯತೆ ನೀಡಲು ಮುಂದಾಗಬೇಕು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿವೃತ್ತ ಮುಖ್ಯ ಪರಿಸರ ಅಧಿಕಾರಿ ರಮೇಶ್.ಬಿ.ಎನ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿ, ಕಸದ ಉತ್ಪಾದನೆಯನ್ನು ಕಡಿಮೆ ಮಾಡಲು, ಮರುಬಳಕೆ ಮತ್ತು ಅದನ್ನು ಗ–ರಿಷ್ಠಗೊಳಿಸಲು ಹಾಗೂ ಪರಿಸರದ ಮೇಲಿನ ತ್ಯಾಜ್ಯದ ಪರಿಣಾಮವನ್ನು ಕಡಿಮೆ ಮಾಡಲು ಸಮಗ್ರ ತ್ಯಾಜ್ಯ ನಿರ್ವಹಣೆಯು ವಿಶಾಲವಾದ ಕಾರ್ಯಚಟುವಟಿ–ಕೆಯಾಗಿದೆ ಎಂದು ತಿಳಿಸಿದರು.

ಸಮುದಾಯಗಳಲ್ಲಿ ಉತ್ಪಾದನೆಯಾಗುವ ಕಸ, ಕಸದ ಸಂಗ್ರಹ, ಸಾಗಣೆ, ವಿಂಗಡಣೆ, ಸಂಸ್ಕರಣೆ ಮತ್ತು ವಿಲೇವಾರಿ ಪ್ರಕ್ರಿಯೆಗಳನ್ನು ಸೂಕ್ತವಾಗಿ ಅರಿತುಕೊಳ್ಳಬೇಕು. ಆರೋಗ್ಯಕರ ಮತ್ತು ಸುಸ್ಥಿರ ಸಮುದಾಯಗಳನ್ನು ನಿರ್ಮಿಸಲು ತ್ಯಾಜ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು ಪ್ರಮುಖ ಗುರಿಯಾಗಿದೆ ಎಂದರು.

ಸ್ವಚ್ಛತಾ ಕಾರ್ಯದ ಬಗೆ ಮನೆ–ಮನೆ ಕಸ ವಿಂಗಡಣೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಈ ಕುರಿತು ಸಾರ್ವಜನಿಕರಿಗೆ ಸೂಚನೆಗಳನ್ನು ನೀಡಲು ಸಿಬ್ಬಂದಿಯವರಿಗೆ ಹ್ಯಾಂಡ್ ಮೈಕ್ ಗಳನ್ನು ವಿತರಿಸಬೇಕು ಎಂದರಲ್ಲದೇ, ಬಳಕೆಯ ಕುರಿತು ಮಾರ್ಗಸೂಚಿ ನೀಡಿದರು.

ಪೌರಕಾರ್ಮಿಕರಿಗೆ ಹಾಗೂ ಸಫಾಯಿ ಕರ್ಮಚಾ–ರಿಗಳಿಗೆ ಸುರಕ್ಷತಾ ಸಾಧನಗಳ ಬಳಕೆ ಹಾಗೂ ನಿರ್ವಹಣೆಗಳ ಕುರಿತು ಹಾಗೂ ಪ್ರಥಮ ಚಿಕಿತ್ಸೆಯ ಕಿಟ್ ಬಳಕೆಯ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಪ್ರಕೃತಿ ಫೌಂಡೇಷನ್, ಬೆಂಗಳೂರು ಮತ್ತು ಲೆಟ್ ಬಿ ದ ಚೇಂಜ್ ಸಂಸ್ಥೆಯ ಪದಾಧಿಕಾರಿಗಳು, ಮೂಲ ಘನ ತ್ಯಾಜ್ಯ ನಿರ್ವಹಣೆ ಹಾಗೂ ಮೂಲ ವಿಂಗಡಣೆ ಮತ್ತು ಮನೆಯಲ್ಲಿಯೇ ಗೊಬ್ಬರ ತಯಾರಿಕೆಯ ಕುರಿತು ನೇರ ಸಂದರ್ಶನದ ಮೂಲಕ ತರಬೇತಿ ನೀಡಲಾಯಿತು.

ಸ್ವಚ್ಛ ಸರ್ವೇಕ್ಷಣೆ–2025 ರನ್ವಯ ಜಿಲ್ಲೆಯ ಫಲಿತಾಂಶ ಹಾಗೂ ಶ್ರೇಣಿಯ ಕುರಿತು ಪರಿಶೀಲನೆ ಮಾಡಿ, ಆಯಾ ಹಂತ, ಘಟಕದಲ್ಲಿ ಕಂಡುಬಂದ ಲೋಪ–ದೋಷಗಳ ನ್ಯೂನ್ಯತೆಗಳನ್ನು ಸರಿಪಡಿಸಿಕೊಳ್ಳುವ ಕುರಿತು ವಿಶ್ಲೇಷಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು, ಮುಖ್ಯಾಧಿಕಾರಿಗಳು, ಪರಿಸರ ಅಭಿಯಂತರರು, ಆರೋಗ್ಯ ನಿರೀಕ್ಷಕರು ಮತ್ತು ಕಮ್ಯುನಿಟಿ ಮೊಬೆಲೈಜರ್ ಗಳು ಹಾಗೂ ಇತರೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಅನುದಾನಿತ ಶಿಕ್ಷಕರಿಗೂ ಪಿಂಚಣಿ ವ್ಯವಸ್ಥೆ ಜಾರಿಗೆ ತರಲು ಆಗ್ರಹ–ಎನ್ ರಾಜಗೋಪಾಲ

ಇಂಡಿ: ಸರಕಾರಿ ಪ್ರಾಥಮಿಕ ಶಾಲೆಗಳಿಗೆ ಹಾಗೂ ಶಿಕ್ಷಕರಿಗೆ ಸಿಗುವ ಸೌಲಭ್ಯಗಳು ಅನುದಾನಿತ ಪ್ರಾಥಮಿಕ ಶಾಲೆಯ ಶಿಕ್ಷಕರಿಗೂ ಸಿಗಬೇಕು. ಅದೇ ರೀತಿಯಲ್ಲಿ ನಿವೃತ್ತಿ ಹೊಂದಿ ಬರಿಗೈಯಲ್ಲಿ ಮನೆಗೆ ಬರುತ್ತಿರುವ ಶಿಕ್ಷಕರನ್ನ ಜೀವನ ತುಂಬಾ ಕಷ್ಟದಾಯಕವಾಗಿದ್ದು, ಸರಕಾರ ಪಿಂಚಣಿ ವ್ಯವಸ್ಥೆ ಜಾರಿಗೆ ತರಲು ಆಗ್ರಹಿಸುತ್ತೇವೆ ಎಂದು ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎನ್ ರಾಜಗೋಪಾಲ್ ಹೇಳಿದರು.

ರವಿವಾರ ಪಟ್ಟಣದ ವಿಜಯಪುರ ರಸ್ತೆಯಲ್ಲಿ ಇರುವ ನವಮಿ ಫಂಕ್ಷನ್ ಹಾಲ್ ದಲ್ಲಿ ನಡೆದ ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ಜಿಲ್ಲಾ ಮತ್ತು ತಾಲೂಕು ಸಂಘದ ಸಂಯುಕ್ತಾ ಆಶ್ರಯದಲ್ಲಿ 2025 ನೇ ಸಾಲಿನ ಶಿಕ್ಷಕರ ದಿನೋತ್ಸವ ನಿಮಿತ್ತವಾಗಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರಧಾನ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಇದೆ ಸಂದರ್ಭದಲ್ಲಿ ಮುಖ್ಯ ಅತಿಥಿ–ಯಾಗಿ ಆಗಮಿಸಿದ ಅಖಿಲ ಕರ್ನಾಟಕ



ಶಾಲಾ ಕಾಲೇಜುಗಳ ಪಿಂಚಣಿ ವಂಚಿತ ನೌಕರ ಸಂಘದ ಅಧ್ಯಕ್ಷ ಜಿ. ಹನುಮಂತಪ್ಪ ಮಾತನಾಡಿ, ಈಗಿರುವ ಸರಕಾರ ಗ್ಯಾರೆಂಟಿ ಯೋಜನೆಗಳಲ್ಲಿ ಎನ್ ಪಿ ಎಸ್ ಬದಲಾಗಿ ಒಪಿಎಸ್ ಮಾಡುವ ಯೋಜನೆ ಹಾಕಿಕೊಂಡಿದ್ದು, ತಮ್ಮಸರಕಾರ ನಮಗೂ ಸಹ ಒಪಿಎಸ್ ಜಾರಿಗೆ ತರಲು ಸಾಧ್ಯ. ಅದಕ್ಕೆ ಶಾಸಕರು ಒಪಿಎಸ್ ಜಾರಿಗೆ ತರಲು ಶ್ರಮಿಸಬೇಕು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಯಶವಂತರಾಯಗೌಡ ಪಾಟೀಲ ಅನುದಾನಿತ ಶಾಲೆಯ ಶಿಕ್ಷಕರ ಬೇಡಿಕೆಗಳನ್ನು ಪ್ರಾಮಾಣಿಕವಾಗಿ ಈಡೇರಿಸಲು ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು.

ಅದೇ ಸಂದರ್ಭದಲ್ಲಿ ಜಿಲ್ಲಾ ಉತ್ತಮ ಶಿಕ್ಷಕರ ಪ್ರಶಸ್ತಿ ಪಡೆದ ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದ ದಿವ್ಯ ಸಾನಿಧ್ಯ ಸ್ವರೂಪಾನಂದ ಸ್ವಾಮಿಜಿ ವಹಿಸಿದರು ಅಧ್ಯಕ್ಷತೆ ಶಿವಾನಂದ ಹಿರೇಕುರಬರ, ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ಕ್ಷೇತ್ರ ಶಿಕ್ಷಣಾಧಿಕಾರಿ ಸೈಯಿದಾಅನಿಸ್ ಎಸ್ ಮುಜಾವರ, ಎಸ್ ಆರ್ ನಡಗಡ್ಡಿ, ಗೀರಿಶ ಬಿರಾದಾರ, ವಾಯ್ ಟಿ ಪಾಟೀಲ,ಸಂಗನಗೌಡ ಹಚಡದ, ಲಕ್ಷ್ಮಿಕಾಂತ ಕಿರನಹಳ್ಳಿ,ಶಾಂತಪ್ಪ ದಶವಂತ, ಪ್ರಕಾಶ ಐರೋಡಗಿ, ಮಂಜುನಾಥ ನಾಯ್ಕೋಡಿ ಸೇರಿದಂತೆ ಅನೇಕರು ಉಪಸ್ಥಿರಿದ್ದರು.

# ಕ್ರೌರ್ಯ ತುಂಬಿದ ವ್ಯವಸ್ಥೆಯ ವಿರುದ್ಧ ಧ್ವನಿಯೆತ್ತಿದ ಪ್ರವಾದಿ ಮೊಹಮ್ಮದ್ ಪೈಗಂಬರ್ ಬಸವರಾಜ್ ಶೀಲವಂತರ್ ಅಭಿಮತ"

ಕೊಪ್ಪಳ: ಪೈಗಂಬರ್ ಅವರು ಕ್ರೌರ್ಯ ಇಡೀ ಜಗತ್ತನ್ನು ಹಿಡಿತದಲ್ಲಿಟ್ಟುಕೊಂಡಿದ್ದ ಅಂದಿನ ಕಾಲಘಟ್ಟದೊಳಗ ಅವರು ಜೀವವಿರೋಧಿ ವ್ಯವಸ್ಥೆ ವಿರುದ್ಧ ಧ್ವನಿಯೆತ್ತಿರುವುದಿದೆಯಲ್ಲ ಅವರ ಈ ಜೀವಪರ ಕಾಳಜಿಯನ್ನು ನಾವು ಅದೇಷ್ಟು ಬಾರಿ ಸ್ಮರಿಸಿದರು ಕಡಿಮೆಯೇಯಾಗುತ್ತದೆ ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಬಸವರಾಜ್ ಶೀಲವಂತರ್ ಹೇಳಿದರು.

ಅವರು ನಗರದ ಹಟಗಾರ ಪೇಟೆ ಬಡಾವಣೆಯಲ್ಲಿ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ 1500 ನೇ ಜನ್ಮದಿನದ ಅಂಗವಾಗಿ ಭ್ರಾತೃತ್ವ ಸಮಿತಿಯಿಂದ ನಡೆದ ಪ್ರವಾದಿಯವರ ಸೌಹಾರ್ದ ಸಂದೇಶ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಎಲ್ಲರಿಗೂ ಸಮಾನ ಅವಕಾಶಗಳು ಸಿಗಬೇಕು, ಮೌಢ್ಯತೆ ಹಾಗೂ ಜಾತಿಯತೆ ಅಳಿಯಬೇಕು. ಇಡೀ ಜಗತ್ತು ಹಸಿವು ಮುಕ್ತವಾಗಬೇಕು . ಶಾಂತಿ ಸೌಹಾರ್ದತೆ ಉಳಿಯಬೇಕು. ಇವು ಅವರ ಆಶಯವಾಗಿತ್ತು.

ಅಲ್ಲದೇ ಪ್ರವಾದಿ, ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ವಿಚಾರಗಳನ್ನು ಅಳವಡಿಸಿಕೊಂಡು ಒಟ್ಟಾಗಿ ಬಾಳೋಣ .ಇನ್ನೂ ಹಲವು ಕಡೆ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸೌಹಾರ್ದತೆಯ ಅರಿವು ಮೂಡಿಸಲು ಮುಂದೆ ಬರಬೇಕು ಎಂದು ಕರೆ ನೀಡಿದರು.

ಭ್ರಾತೃತ್ವ ಸಮಿತಿಯ ಸಂಚಾಲಕ ಎಸ್.ಎ.ಗಫಾರ್ ,ಕಾರ್ಮಿಕ ಮುಖಂಡ ಕೆ.ಬಿ.ಗೋನಾಳ, ಪಾಸ್ಟರ್ಸ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಅಪ್ಪಣವರ್ ಮತ್ತು ಮುಖಂಡ ಶರಣು ಗಡ್ಡಿ ಅವರುಗಳು ಮಾತನಾಡಿ, ಪ್ರಜಾಪ್ರಭುತ್ವ ಇಲ್ಲದ ಹಳೆ ಕಾಲಘಟ್ಟದಲ್ಲಿ ಬಂದ ಪ್ರವಾದಿಗಳು ಜಗತ್ತಿಗೆ ಪ್ರೀತಿ ಕೊಟ್ಟಿದ್ದಾರೆ. ಪ್ರವಾದಿಗಳ ಹತ್ತಿರ ಪುರುಷರು, ಮಹಿಳೆಯರು ಯಾರೇ ಬಂದು ಎಂಥಾ ಜಟಿಲ ಪ್ರಶ್ನೆಗಳನ್ನು ಕೇಳಿದರೂ ಬಹಳ ಸರಳವಾಗಿ ಸಂಕ್ಷಿಪ್ತವಾಗಿ ಸ್ಪಷ್ಟ ಉತ್ತರ ಕೊಡುತ್ತಿದ್ದರು. ಮೊಹಮ್ಮದ್ ಪ್ರವಾದಿ ಅವರು ಹೇಳಿ ಕೊಟ್ಟಂತಹ ವಿಚಾರಗಳನ್ನು. ನಡೆದುಕೊಂಡಂತಹ ದಾರಿ ಮತ್ತು ಎಲ್ಲಾ ಧರ್ಮಗಳು ಹೇಳುವಂತಹ ಸೌಹಾರ್ದತೆಯ ಸಂದೇಶ ಹೆಚ್ಚೆಚ್ಚು ಜನರಿಗೆ ತಲುಪಿಸಬೇಕು ಎಂದು ಅಭಿಪ್ರಾಯಪಟ್ಟರು.



# 500 ಕೋಟಿ ಮಹಿಳಾ ಪ್ರಯಾಣಿಕರ ಉಚಿತ ಪ್ರಯಾಣ; ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ನಲ್ಲಿ ದಾಖಲು

**ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ಕೃಷ್ಣಾದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಎಚ್. ಎಂ. ರೇವಣ್ಣ ಮೊದಲಾದವರು ಉಪಸ್ಥಿತರಿದ್ದರು.**

ಪಂಚ ಗ್ಯಾರಂಟಿ ಯೋಜನೆ ಅಡಿ ಇದುವರೆಗೆ ರೂ. 97,813 ಕೋಟಿ ಅನುದಾನವನ್ನು ವೆಚ್ಚ ಮಾಡಲಾಗಿದೆ. ಇದರಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 1.24ಕೋಟಿ ಫಲಾನುಭವಿಗಳಿಗೆ ಒಟ್ಟು ರೂ.50,005 ಕೋಟಿ, ಗೃಹಜ್ಯೋತಿ ಯೋಜನೆಯಡಿ 1.64 ಕೋಟಿ ಫಲಾನುಭವಿಗಳಿಗೆ ರೂ. 18,139 ಕೋಟಿ, ಯುವನಿಧಿ ಯೋಜನೆಯಡಿ 2.55ಲಕ್ಷ ಫಲಾನುಭವಿಗಳಿಗೆ ರೂ.623 ಕೋಟಿ, ಶಕ್ತಿ ಯೋಜನೆಯಡಿ 544ಕೋಟಿ ಫಲಾನುಭವಿಗಳಿಗೆ ರೂ.13,903ಕೋಟಿ ಹಾಗೂ ಅನ್ನಭಾಗ್ಯ ಯೋಜನೆಯಡಿ 72.02ಕೋಟಿ ಫಲಾನುಭವಿಗಳಿಗೆ ಒಟ್ಟು 11,821.17 ಕೋಟಿ ವೆಚ್ಚ ಮಾಡಲಾಗಿದೆ.

?ಮರಣ ಹೊಂದುವ ಫಲಾನುಭವಿಗಳ ಪಟ್ಟಿಯನ್ನು ಪ್ರತಿ ತಿಂಗಳು ಪಂಚಾಯತ್ ಹಂತದಲ್ಲಿ ನವೀಕರಿಸಿ ಸಂಬಂಧಪಟ್ಟ



ಬ್ಯಾಂಕುಗಳಿಗೆ ಮಾಹಿತಿಯನ್ನು ಒದಗಿಸಬೇಕು.

ಮರಣ ಹೊಂದುವ ಫಲಾನುಭವಿಗಳ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಬೇಕು.

ಪಂಚಾಯತ್ ಮಟ್ಟದಲ್ಲಿ ಫಲಾನುಭವಿಗಳ ಸೇರ್ಪಡೆ ಮತ್ತು ತೆಗೆದು ಹಾಕುವಿಕೆಗೆ ಕ್ರಮ ಕೈಗೊಳ್ಳಬೇಕು.

?ಜಿಎಸ್ ಟಿ ರಿಟರ್ನ್ ಸಲ್ಲಿಸುವವರು ಗೃಹಲಕ್ಷ್ಮಿ ಯೋಜನೆ ಲಾಭ ಪಡೆಯುವ ಕುರಿತು ಇರುವ ಗೊಂದಲವನ್ನು ನಿವಾ–ರಿಸಲು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

?ಅನರ್ಹ ಬಿಪಿಎಲ್ ಕಾರ್ಡುದಾರರನ್ನು ಗುರುತಿಸಿ ಬಿಪಿಎಲ್ ಕಾರ್ಡ್ ರದ್ದುಪಡಿಸುವ ಕಾರ್ಯವನ್ನು ಪಂಚಾಯತ್ ಮಟ್ಟದಲ್ಲಿ ನಡೆಸಬೇಕು. ಈ ಕುರಿತಾಗಿರುವ ಮಾನದಂಡಗಳನ್ನು ಕಟ್ಟುನಿಟ್ಟಿನಿಂದ ಜಾ–ರಿಗೊಳಿಸಬೇಕು ಎಂದು ಮುಖ್ಯಮಂತ್ರಿಗಳು ಅವರು ಸೂಚನೆ ನೀಡಿದರು.

ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಅಕ್ಕಿಯ ಬದಲು ಪ್ರದೇಶವಾರು ಇತರ ಧಾನ್ಯಗಳನ್ನು ನೀಡುವ ಬಗ್ಗೆ ಪರಿಶೀಲನೆ.

?ಗ್ಯಾರಂಟಿ ಯೋಜನೆಗಳ ಲಾಭ ಅರ್ಹ ಫಲಾನುಭವಿಗಳಿಗೆ ತಲುಪಿಸಲು ಆಂದೋಲನ ಮಾದರಿಯಲ್ಲಿ ಕಾರ್ಯ ನಿರ್ವಹಿಸಬೇಕು.

# ಜಟ್ಟಿ ಕಾಳಗ ವಿಕ್ಷೀಸಿದ ರಾಜಮಾತೆ ಪ್ರಮೋದಾದೇವಿ

ಮೈಸೂರು: ಅರಮನೆಯ ಕರಿಕಲ್ಲು ತೊಟ್ಟಿಯಲ್ಲಿ ನಡೆದ ಜಟ್ಟಿ ಕಾಳಗದಲ್ಲಿ ನಾಲ್ವರು ಜಟ್ಟಿಗಳು ಸೆಣಸಾಡಿದರು. ಮೈಸೂರಿನ ಬಲರಾಮ್ ಜಟ್ಟಿ 4ನೇ ಬಾರಿ, ಚಾಮರಾಜನಗರದ ಶ್ರೀನಿವಾಸ ಜಟ್ಟಿ 3ನೇ ಬಾರಿ, ಬೆಂಗಳೂರಿನ ನಾರಾಯಣ ಜಟ್ಟಿ 9ನೇ ಬಾರಿ, ಚನ್ನಪಟ್ಟಣದ ರಾಘವೇಂದ್ರ ಜಟ್ಟಿ ಮೊದಲ ಬಾರಿ ಜಟ್ಟಿ ಕಾಳಗದಲ್ಲಿ ಭಾಗಿಯಾಗಿದರು. ರಾಜಮಾತೆ ಪ್ರಮೋದಾದೇವಿ ಜಟ್ಟಿ ಕಾಳಗ ಕಣ್ತುಂಬಿಕೊಂಡರು.

ಮೈಸೂರಿನ ರಾಜಾಶ್ರಯದಲ್ಲಿ ಬೆಳೆದು ಬಂದಿರುವ ಈ ಕಾಳಗ ವಿಜಯ ದಶಮಿಯಂದು ಅದರಲ್ಲೂ ಜಂಬೂ ಸವಾರಿ ಮೆರವಣಿಗೆಗೂ ಮುನ್ನ ನಡೆಯುವ ಸಾಂಪ್ರದಾಯಿಕ ಕ್ರೀಡೆ. ಕಣದಲ್ಲಿ ಜಟ್ಟಿಗಳ ರಕ್ತ ಚೆಲ್ಲಿ ರಾಜಮನೆತನಕ್ಕೆ ಜಟ್ಟಿಗಳು ತಮ್ಮ ನಿಷ್ಠೆ ಪ್ರದರ್ಶಿಸುತ್ತಾರೆ, ಬಳಿಕಷ್ಟೇ ಅರಮನೆಯಿಂದ ಜಂಬೂ ಸವಾರಿ ಹೊರಡುವುದು ಪ್ರತೀತಿ. ಮೆರವಣಿಗೆಯ ಮುಂಚೂಣಿಯಲ್ಲಿ ಪಟ್ಟದ ಆನೆಗಳಾದ ಪ್ರೀತಿ, ಚಂಚಲ, ಧನಂಜಯ, ಭೀಮ ಹಾಗೂ ಪಟ್ಟದ ಹಸು, ಪಟ್ಟದ ಕುದುರೆ, ಮಂಗಳ ವಾದ್ಯದೊಂದಿಗೆ ಸಾಗಿದ್ದು. ಜೈ ಭುವನೇಶ್ವರಿ ದೇವಾಲದ ಬಳಿ ಇರುವ ಬನ್ನಿ ಮರಕ್ಕೆ ಪೂಜೆ ಸಲ್ಲಿಸಿ, ಬಳಿಕ ಬೆಳ್ಳಿ ಪಲ್ಲಕ್ಕಿಯಲ್ಲಿ ಸ್ವಸ್ಥಾನಕ್ಕೆ ವಾಪಸ್ ಆದ್ರು. ಬಳಿಕ ಕಂಕಣ ವಿಸರ್ಜನೆ ಮಾಡಿದರು.

ಮೆರವಣಿಗೆಯ ಮುಂಚೂಣಿಯಲ್ಲಿ ಪಟ್ಟದ ಆನೆಗಳಾದ ಪ್ರೀತಿ, ಚಂಚಲ, ಧನಂಜಯ, ಭೀಮ ಹಾಗೂ ಪಟ್ಟದ ಹಸು, ಪಟ್ಟದ ಕುದುರೆ, ಮಂಗಳ ವಾದ್ಯದೊಂದಿಗೆ ಸಾಗಿದ್ದು. ಜೈ ಭುವನೇಶ್ವರಿ ದೇವಾಲದ ಬಳಿ ಇರುವ ಬನ್ನಿ ಮರಕ್ಕೆ ಪೂಜೆ ಸಲ್ಲಿಸಿ, ಬಳಿಕ ಬೆಳ್ಳಿ ಪಲ್ಲಕ್ಕಿಯಲ್ಲಿ ಸ್ವಸ್ಥಾನಕ್ಕೆ ವಾಪಸ್ ಆದ್ರು. ಬಳಿಕ ಕಂಕಣ ವಿಸರ್ಜನೆ ಮಾಡಿದರು.



Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.